ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಗ್ರಾಮ ಪಂಚಾಯತ್ ಮತ್ತು ಪ್ರಮುಖ ಪಟ್ಟಣಗಳ ಕೇಂದ್ರಗಳಲ್ಲಿ ಪ್ರಾರಂಭಿಸುವುದು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):-

607(813) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2019-20ನೇ ಸಾಲಿನ ಆಯ-ವ್ಯಯ ಭಾಷಣದಲ್ಲಿ ಮುಖ್ಯ ಮಂತ್ರಿಗಳು ಘೋಷಿಸಿದಂತೆ, 1000 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ರಾಜ್ಯದ ಹೋಬಳಿ ಕೇಂದ್ರದಲ್ಲಿ ಸ್ಥಾಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾ ಪ್ರವೇಶವನ್ನು ಶಿಶುವಿಹಾರದಿಂದ (Lower Kindergarten) ಪ್ರಾರಂಭಿಸಿ, 12ನೇ ತರಗತಿಯವರೆಗೆ ಶಾಲೆಗಳನ್ನು ನಡೆಸಲು ತೆರೆಯಲಾಗಿದೆಯೇ; (ವಿವರ ನೀಡುವುದು)

(ಇ) ಸರ್ಕಾರ ಘೋಷಿಸಿದಂತೆ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸಿರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಗ್ರಾಮ ಪಂಚಾಯತ್ ಕೇಂದ್ರಗಳಲ್ಲಿ ಮತ್ತು ಇತರೆ ಪ್ರಮುಖ ಪಟ್ಟಣಗಳ ಕೇಂದ್ರಗಳಲ್ಲಿ ತೆರೆಯಲು ಹೊಂದಿರುವ ಯೋಜನೆಗಳೇನು? (ಸಂಪೂರ್ಣ ಮಾಹಿತಿ ನೀಡುವುದು)